# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 1) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ, 2) ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಮತ್ತು 3) ಶ್ರೀ ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ ಇವರುಗಳ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 514 ಗ್ರಾಪಂಕಾ 2014, ದಿನಾಂಕ 21.11.2014
2) ಮಾನ್ಯ ಉಪಲೋಕಾಯುಕ್ತ ರವರ ವರದಿ ಸಂಖ್ಯೆ: LOK/INQ/14-A/629 / 2014 / ARE-10, ದಿನಾಂಕ: 08.11.2016.
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 12.01.2017
4) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 24.01.2017
5) ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಇವರು ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 02.02.2017
6) ಶ್ರೀ ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 18.02.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ 1) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ, 2) ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಮತ್ತು 3) ಶ್ರೀ. ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ, ಇವರು ಸದರಿ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ನಡೆಸಿದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:514:ಗ್ರಾಪಂಕಾ:2014, ದಿನಾಂಕ:21–11–2014ರಲ್ಲಿ ವಹಿಸಲಾಗಿತ್ತು.

ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–10, ಕರ್ನಾಟಕ ಲೋಕಾಯುಕ್ತ ಇವರು . 1) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ, 2) ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಮತ್ತು 3) ಶ್ರೀ. ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ, ಇವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"That the DGO-1 – Sri. Abbar Ali Halli, PDO, Babaleshwar Gram Panchayath, DGO-2 – Sri B. T Baluchi, Retd PDO, DGO 3 – Sri. P.S. Chouhan, the then Jr. Engineer in PRE sub division, Bijapur, Drawn the bills in respect of construction of guttur from the house Of Smt. Jairabi to the house of Sri. Huddar Master without executing the work, but by producing the photograph of some other gutter, misappropriated the amount of Rs. 1,72,192/- though DGOs have not got constructed the gutter from the house of Smt. Jairabi to the house of Sri. Huddar Master which amounted to misconduct on DGOs behalf. Thereby, DGOs, being the Government servants failed to maintain absolute integrity besides devotion to duty and acted in a manner unbecoming of Government servants and thus committed misconduct as enumerated U/R 3(1) of Karnataka Civil Service (Conduct) Rules 1966."

ವಿಚಾರಣಾಧಿಕಾರಿಯವರು, ದಿನಾಂಕ: 27.10.2016 ರಂದು ಮಾನ್ಯ ಉಪಲೋಕಾಯುಕ್ತರಿಗೆ ವಿಚಾರಣಾ ವರದಿಯನ್ನು ಸಲ್ಲಿಸಿದ್ದು(ಪುಟ-14) ಸದರಿ ವರದಿಯ ಅನುಸಾರ 1) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೋಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ, 2) ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಮತ್ತು 3) ಶ್ರೀ. ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ, ರವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ, ಈ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) (2) (ಡಿ) ಅನುಸಾರ ದಿನಾಂಕ: 03.12.2016 ರಂದು ಮಾಡಿರುವ ಶಿಫಾರಸ್ಸಿನಲ್ಲಿ (ಪುಟ-18) 1) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೋಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ, 2) ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಮತ್ತು 3) ಶ್ರೀ. ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ, ಇವರಿಗೆ ಈ ಕೆಳಕಂಡಂತೆ ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೋಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ. ಮತ್ತು ಶ್ರೀ. ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ, ಇವರುಗಳಿಗೆ ಅವರ ಮುಂದಿನ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ದಂಡನೆ ವಿಧಿಸುವುದು ಮತ್ತು ಇವರುಗಳ ವೇತನ ಮತ್ತು ಭತ್ಯಗಳಿಂದ ತಲಾ ರೂ. 57,397/- ನ್ನು ವಸೂಲಿ ಮಾಡುವುದು ಹಾಗೂ ಶ್ರೀ. ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಹಾಲಿ ನಿವೃತ್ತ) ಇವರ ಪಿಂಚಣಿ ಸೌಲಭ್ಯಗಳಿಂದ ರೂ. 57,397/- ಅನ್ನು ವಸೂಲಿ ಮಾಡುವುದು.

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (4) ರಿಂದ (5) ರಲ್ಲಿ ಸದರಿ ನೌಕರರು ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ ಹಾಗೂ ಸದರಿ ನೌಕರರುಗಳ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಸದರಿ ನೌಕರರುಗಳಿಗೆ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿನ ಶಿಫಾರಸ್ಸಿನಂತೆ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 791 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 08.11.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಪ್ರಕರಣದಲ್ಲಿ ಭಾಗಿಯಾಗಿರುವ ನೌಕರರುಗಳಿಗೆ ಕೆಳಗಿನಂತೆ ದಂಡನೆಯನ್ನು ವಿಧಿಸಿ ಆದೇಶಿಸಿದೆ.

1) ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1957 ರನ್ವಯ ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ಮುಂದಿನ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವುದು ಹಾಗೂ ಇವರ ವೇತನ ಮತ್ತು ಭತ್ಯೆಗಳಿಂದ ರೂ. 57,397/- ನ್ನು ವಸೂಲಿ ಮಾಡುವುದು.
2) ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1957 ರನ್ವಯ ಶ್ರೀ ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜನಿಯರಿಂಗ್ ಉಪ ವಿಭಾಗ ವಿಜಯಪುರ, ಇವರುಗಳಿಗೆ ಇವರ ಮುಂದಿನ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವುದು ಹಾಗೂ ಇವರ ವೇತನ ಮತ್ತು ಭತ್ಯೆಗಳಿಂದ ರೂ. 57,397/- ನ್ನು ವಸೂಲಿ ಮಾಡುವುದು.
3) ಕರ್ನಾಟಕ ನಾಗರೀಕ ಸೇವಾ ನಿಯಮ 214(1)(ಬಿ) ಅನ್ವಯ ಶ್ರೀ ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಪ್ರಸ್ತುತ ನಿವೃತ್ತ) ಇವರ ಪಿಂಚಣಿ ಸೌಲಭ್ಯಗಳಿಂದ ಸದರಿಯವರ ಪಿಂಚಣಿ ಸೌಲಭ್ಯಗಳಿಂದ ರೂ. 57,397/- ಅನ್ನು ವಸೂಲಿ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ತಾಲ್ಲೂಕು ಪಂಚಾಯತಿ, ವಿಜಯಪುರ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
6) ಶ್ರೀ ಅಬ್ಬಾರಅಲಿ ಹಳ್ಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, ಪ್ರಸ್ತುತ ಬಳ್ಳೊಳ್ಳಿ ಗ್ರಾಮ ಪಂಚಾಯಿತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
7) ಶ್ರೀ ಪಿ. ಎಸ್. ಚವ್ಹಾಣ್, ಕಿರಿಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ವಿಜಯಪುರ.
8) ಶ್ರೀ ಬಿ.ಟಿ.ಬಲೂಚಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಬಲೇಶ್ವರ ಗ್ರಾಮ ಪಂಚಾಯಿತಿ, (ಪ್ರಸ್ತುತ ನಿವೃತ್ತ), ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
9) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.